ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 1407(1543)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಬಿ. ಜಿ. ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ಕಲಬುರಗಿಯಲ್ಲಿ ಸ್ಥಾಪನೆಯಾಗಬೇಕಿದ್ದ ನವೀಕರಿಸಬಹುದಾದ ಇಂಧನ ಕಛೇರಿ ಬಗ್ಗೆ

(ಅ) ಕಲಬುರಗಿಯಲ್ಲಿ ಸ್ಥಾಪನೆಯಾಗಬೇಕಿದ್ದ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ಕಛೇರಿ ಬೇರೆಡೆಗೆ ಸ್ಥಳಾಂತರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸ್ಥಳಾಂತರಗೊಳಿಸಲು ಕಾರಣಗಳೇನು; (ವಿವರ ನೀಡುವುದು)

(ಇ) ಸದರಿ ಕಛೇರಿಯು ಕಲಬುರಗಿಯಲ್ಲಿಯೇ ಸ್ಥಾಪನೆಯಾಗಬೇಕೆಂಬುದು ಸ್ಥಳೀಯರ ಆಗ್ರಹವಾಗಿದ್ದು, ಸದರಿ ಕಛೇರಿಯನ್ನು ಪುನಃ ಇಲ್ಲಿಯೇ ಸ್ಥಾಪಿಸಲು ಸರ್ಕಾರ ಕ್ರಮಕೈಗೊಳ್ಳುವುದೇ?